ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ಇಂಡಿ.

OS No.269/2019

DW:1

ದಿನಾಂಕ 29.06.2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ವಾದಿ ಪರ ಶ್ರೀ.ಆರ್.ಜಿ.ಎಸ್. ವಕೀಲರಿಂದ:

ನನಗೆ ಈ ದಾವೆ ಮಾಡಿರುವುದು 2023 ನೇ ಇಸವಿಯಲ್ಲಿ ಗೊತ್ತಾಗಿರುತ್ತದೆ. 2023 ರಲ್ಲಿ ನನಗೆ ನ್ಯಾಯಾಲಯದಿಂದ ನೋಟಿಸ್ ಬಂದಿರುತ್ತದೆ. ನನಗೆ ನೋಟಿಸ್ ಬಂದ ನಂತರ ನ್ಯಾಯಾಲಯಕ್ಕೆ ಹಾಜರಾಗಿರುತ್ತೇನೆ. ನಾನು ದಾವಾ ಆಸ್ತಿಯನ್ನು 2019 ರಲ್ಲಿ ಖರೀದಿ ಮಾಡಿರುತ್ತೇನೆ. ದಾವಾ ಆಸ್ತಿಯನ್ನು ಖರೀದಿ ಮಾಡುವ ಪೂರ್ವದಲ್ಲಿ ದಾವಾ ಆಸ್ತಿಯು ಮೂಲತಃ ಯಾರಿಂದ ಮತ್ತು ಹೇಗೆ ಬಂದಿರುತ್ತದೆ ಎಂದು ನಾನು ವಿಚಾರಿಸಿರುತ್ತೇನೆ. ಸದರಿ ವಿಚಾರ ಮಾಡಿ ನೋಡಿದ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಮಾಡಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಪಿತ್ರಾರ್ಜಿತ ಆಸ್ತಿ ಇದ್ದರು ಸಹ ಸ್ವಯಾರ್ಜಿತ ಆಸ್ತಿ ಇರುತ್ತದೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯು ನಮ್ಮ ಕಬ್ಜಾ ವಹಿವಾಟಿನಲ್ಲಿ ಇರುತ್ತದೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಯ ಸಹಿಯನ್ನು ಬಿಟ್ಟು ಬೇರೆಯವರ ಸಹಿ ಮಾಡಿಸಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಪಿತ್ರಾರ್ಜಿತ ಆಸ್ತಿ ಇದ್ದರು ಸಹ ವಾದಿಯ ಹಕ್ಕನ್ನು ನಷ್ಟ ಮಾಡುವ

ದುರುದ್ದೇಶದಿಂದ ಖೊಟ್ಟಿ ಖರೀದಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಖರೀದಿ ಹಣವನ್ನು ಎಷ್ಟು ಕೊಟ್ಟಿರುತ್ತೇವೆ ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಮಾಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ: ಇಲ್ಲ:

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೆ. ಸರಿ ಇದೆ.

ಸಹಿ/-

ಜೆ.ಎಂ.ಎಫ್.ಸಿ. ನ್ಯಾಯಾಲಯ

ಇಂಡಿ.